ಕರ್ನಾಟಕ ರಾಜ್ಯಪತ್ರ

ಅಧಿಕೃತವಾಗಿ ಪ್ರಕಟಿಸಲಾದುದು

ವಿಶೇಷ ರಾಜ್ಯ ಪತ್ರಿಕೆ

¨ÁUÀ 1 Part – I	ಬೆಂಗಳೂರು, ಶನಿವಾರ,04, ಜುಲೈ, 2020 (ಆಷಾಢ ,1 3, ಶಕವರ್ಷ, 1942) Bengaluru, SATURDAY, 04, JULY, 2020 (Ashadha,13,ShakaVarsha,1942)	ನಂ. 280 No. 280

ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ: ಕರ್ನಾಟಕ ಸರ್ಕಾರಿ ವಿಮಾ ಇಲಾಖೆಯ ಕಡ್ಡಾಯ ಜೀವ ವಿಮಾ ಯೋಜನೆಯಡಿ ದಿನಾಂಕ: 01.04.2014 ರಿಂದ 31.03.2016ಕ್ಕೆ ಅಂತ್ಯಗೊಂಡ ದ್ವೈವಾರ್ಷಿಕ ಅವಧಿಗೆ ಮೌಲ್ಯಮಾಪನ ವರದಿಯ ಆಧಾರದ ಮೇಲೆ ಜೀವ ವಿಮಾ ಪಾಲಿಸಿಗಳ ಸ್ಥಿರಪಡಿಸಿದ ಮೊತ್ತದ ಮೇಲೆ ಬೋನಸ್ ನೀಡಲು ಸರ್ಕಾರದ ಮಂಜೂರಾತಿ ನೀಡುವ ಬಗ್ಗೆ.

ಓದಲಾಗಿದೆ: ನಿರ್ದೇಶಕರು, ಕರ್ನಾಟಕ ಸರ್ಕಾರಿ ವಿಮಾ ಇಲಾಖೆ, ಬೆಂಗಳೂರು, ಇವರ ಪತ್ರ ಸಂಖ್ಯೆ: ಕೆಜಿಐಡಿ/ಎವಿಜಿ/2014-16-ವಿ.ಮೌ.ಮಾ.ವ/402/ 2019-20, ದಿನಾಂಕ: 16.11.2019.

ಪ್ರಸ್ತಾವನೆ:

ನಿರ್ದೇಶಕರು, ಕರ್ನಾಟಕ ಸರ್ಕಾರಿ ವಿಮಾ ಇಲಾಖೆ, ಇವರು ಮೇಲೆ ಓದಲಾದ ದಿನಾಂಕ: 16.11.2019ರ ಪತ್ರದಲ್ಲಿ ಕರ್ನಾಟಕ ಸರ್ಕಾರಿ ವಿಮಾ ಇಲಾಖೆಯಲ್ಲಿ ನಿರ್ವಹಿಸಲಾಗುತ್ತಿರುವ ಕಡ್ಡಾಯ ವಿಮಾ ಯೋಜನೆಗೆ ಸಂಬಂಧಿಸಿದಂತೆ ಕರ್ನಾಟಕ ಸರ್ಕಾರಿ ನೌಕರರ (ಕಡ್ಡಾಯ ಜೀವ ವಿಮಾ) ನಿಯಮಗಳು, 1958ರ ನಿಯಮ-22 ರನ್ವಯ ವಿಮಾ ಮೌಲ್ಯಮಾಪನವನ್ನು ದ್ವೈವಾರ್ಷಿಕವಾಗಿ ಮಂಡಿಸಬೇಕಾಗಿದ್ದು, ಅದರನ್ವಯ 2014-2016ನೇ ದ್ವೈವಾರ್ಷಿಕ ಅವಧಿಯಲ್ಲಿ ಚಾಲ್ತಿಯಲ್ಲಿದ್ದ ವಿಮಾ ಪಾಲಿಸಿಗಳ ಮೌಲ್ಯಮಾಪನ ನಡೆಸಿ, ಅಧಿಲಾಭಾಂಶವನ್ನು ಘೋಷಿಸಲು ಅನುವಾಗುವಂತೆ ಮೌಲ್ಯಮಾಪನ ಕಾರ್ಯ ಕೈಗೊಳ್ಳಲು ವಿಮಾ ಗಣಕರನ್ನು ನೇಮಿಸಲಾಗಿತ್ತೆಂದು ಮತ್ತು ವಿಮಾ ಗಣಕರು 2014-16ನೇ ಅವಧಿಗೆ ಸಂಬಂಧಿಸಿದಂತೆ ಮೌಲ್ಯಮಾಪನ ಕಾರ್ಯವನ್ನು ಪೂರ್ಣಗೊಳಿಸಿ ಮೌಲ್ಯಮಾಪನ ವರದಿಯನ್ನು ಸಲ್ಲಿಸಿದ್ದಾರೆಂದು ವರದಿ ಮಾಡಿದ್ದಾರೆ. ಸದರಿ ಮೌಲ್ಯಮಾಪನ ವರದಿಯ ಪ್ರಮುಖ ಅಂಶಗಳು ಈ ಕೆಳಕಂಡಂತಿವೆ:-

1.	ಚಾಲ್ತಿಯಲ್ಲಿದ್ದ ಪಾಲಿಸಿಗಳು	: ಸಂಖ್ಯೆ: 11,47,790
2.	ವಿಮಾ ಭರವಸೆ ಮೊತ್ತ	: ರೂ. 17,083.36 ಕೋಟಿಗಳು
3.	ಪ್ರತ್ಯಾವರ್ತಿ ಅಧಿಲಾಭಾಂಶ	: ರೂ. 8,485.88 ಕೋಟಿಗಳು
4.	ವಾರ್ಷಿಕ ಪ್ರೀಮಿಯಂ	: ರೂ. 866.33 ಕೋಟಿಗಳು
5.	ಜೀವ ವಿಮಾ ನಿಧಿಯ ಶಿಲ್ಕು	: ರೂ. 9,525.53 ಕೋಟಿಗಳು

6. ವಿಮಾ ವ್ಯವಹಾರದ ಮೇಲಿನ ನಿವ್ವಳ ಹೊಣೆಗಾರಿಕೆ : ರೂ. 8,343.07 ಕೋಟಿಗಳು

7. ಮೌಲ್ಯಮಾಪನದ ಹೆಚ್ಚುವರಿ (Surplus) : ರೂ. 1182.47 ಕೋಟಿಗಳು

ವಿಮಾ ಗಣಕರು ತಮ್ಮ ವರದಿಯಲ್ಲಿ ದಿನಾಂಕ:31.03.2016 ರಂದು ಚಾಲ್ತಿಯಲ್ಲಿರುವ ಎಲ್ಲಾ ಪಾಲಿಸಿಗಳಿಗೆ ಪ್ರತಿ ಸಾವಿರ ವಿಮಾ ಮೊತ್ತಕ್ಕೆ ಪ್ರತಿ ವರ್ಷಕ್ಕೆ ರೂ.85/-ರಂತೆ ಪ್ರತ್ಯಾವರ್ತಿ ಲಾಭಾಂಶವನ್ನು ಘೋಷಿಸಲು ಶಿಫಾರಸ್ಸು ಮಾಡಿರುತ್ತಾರೆ. ಈ ಉದ್ದೇಶಕ್ಕಾಗಿ ಮೌಲ್ಯಮಾಪನದಲ್ಲಿ ಒಟ್ಟಾರೆ ಹೆಚ್ಚಳವಾಗಿರುವ ರೂ.1182.47 ಕೋಟಿಗಳಲ್ಲಿ ರೂ.488.41 ಕೋಟಿಗಳನ್ನು ಲಾಭಾಂಶವಾಗಿ ವಿತರಣೆ ಮಾಡಲು ಹಾಗೂ ಉಳಿದ ರೂ.694.33 ಕೋಟಿಗಳನ್ನು ಅವಗಿರ್ಕೃತವಾಗಿ ಮುಂದುವರಿಸಲ್ಪಟ್ಟ ಮೊಬಲಗು ಎಂದು ಪರಿಗಣಿಸಿ ಮುಂದಿನ ಮೌಲ್ಯಮಾಪನ ಅವಧಿಗೆ ಕೊಂಡೊಯ್ಯಲು ವಿಮಾ ಗಣಕರು ಶಿಫಾರಸ್ಸು ಮಾಡಿರುತ್ತಾರೆ.

ಕರ್ನಾಟಕ ಸರ್ಕಾರಿ ವಿಮಾ ಇಲಾಖೆಯು ವಿಮಾ ಗಣಕರು ಮೌಲ್ಯಮಾಪನ ವರದಿಯಲ್ಲಿ ಮಾಡಿರುವ ಶಿಫಾರಸ್ಸುಗಳನ್ನು ಪರಿಗಣಿಸಿ, ದಿನಾಂಕ:31.03.2016 ರಂದು ಚಾಲ್ತಿಯಲ್ಲಿದ್ದ ಪಾಲಿಸಿಗಳ ಮೇಲೆ ವಿಮಾ ಮೊತ್ತದ ಪ್ರತಿ ರೂ.1000/-ಗಳಿಗೆ ವಾರ್ಷಿಕ ರೂ.85/-ರ ದರದಲ್ಲಿ ಬೋನಸ್ ನೀಡುವುದರ ಜೊತೆಗೆ ದಿನಾಂಕ: 01.04.2016 ರಿಂದ 31.03.2018ರ ಅವಧಿಯಲ್ಲಿ ಅವಧಿಪೂರ್ಣ, ಮರಣಜನ್ಯ, ವಿಮಾತ್ಯಾಗ ಆದ ಪಾಲಿಸಿಗಳಿಗೂ ಸಹ ಮುಂದಿನ ಮೌಲ್ಯಮಾಪನ ದಿನಾಂಕದವರೆಗೆ ಪ್ರತಿ ರೂ.1000/-ಗಳಿಗೆ ವಾರ್ಷಿಕ ರೂ.85/-ರ ಮಧ್ಯಂತರ ಲಾಭಾಂಶವನ್ನು ನೀಡಲು ಈ ಕೆಳಕಂಡ ನಿರ್ದಿಷ್ಟ ಪ್ರಸ್ತಾವನೆಗಳಿಗೆ ಸರ್ಕಾರದ ಅನುಮೋದನೆಯನ್ನು ಕೋರಿರುತ್ತದೆ.:-

i. ದಿನಾಂಕ: 01-04-2014 ರಿಂದ 31-03-2016ರ ದ್ವೈವಾರ್ಷಿಕ ಮೌಲ್ಯಮಾಪನ ಅವಧಿಯಲ್ಲಿ ಚಾಲ್ತಿಯಲ್ಲಿದ್ದ ಎಲ್ಲಾ ಪಾಲಿಸಿಗಳಿಗೆ ಹಾಗೂ ಚಾಲ್ತಿಯಲ್ಲಿದ್ದ ಪ್ರತಿ ತಿಂಗಳ ಅವಧಿಯನ್ನು ಒಳಗೊಂಡಂತೆ ಪಾಲಿಸಿಗಳ ಸ್ಥಿರಪಡಿಸಿದ ವಿಮಾ ಮೊತ್ತದ ಮೇಲೆ ಪ್ರತಿ ಸಾವಿರ ರೂಪಾಯಿಗಳಿಗೆ ಪ್ರತಿ ವರ್ಷಕ್ಕೆ ರೂ.85/-ರಂತೆ ಸರಳ ಪ್ರತ್ಯಾವರ್ತಿ ಲಾಭಾಂಶ (ಸಿಂಪಲ್ ರಿವರ್ಷನರಿ ಬೋನಸ್) ಘೋಷಿಸುವುದು.

ii. ಅವಧಿಪೂರ್ಣ, ಮರಣಜನ್ಯ ಹಾಗೂ ವಿಮಾ ತ್ಯಾಗ ಮೌಲ್ಯಗಳಿಂದ ದಿನಾಂಕ: 01-04-2016 ರಿಂದ 31-03-2018ರ ಅವಧಿಯಲ್ಲಿ ಹೊರ ಹೋಗಿರುವ ವಿಮಾ ಪಾಲಿಸಿಗಳಿಗೆ ಸಾವಿರ ರೂಪಾಯಿಗಳಿಗೆ ಪ್ರತಿ ವರ್ಷಕ್ಕೆ ರೂ.85/-ರಂತೆ ಮಧ್ಯಂತರ ಲಾಭಾಂಶವನ್ನು (ಇಂಟೀರಿಯಮ್ ಬೋನಸ್) ಘೋಷಿಸುವುದು.

ಸರ್ಕಾರವು ಈ ಪ್ರಸ್ತಾವನೆಯನ್ನು ವಿವರವಾಗಿ ಪರಿಶೀಲಿಸಿ ಈ ಕೆಳಕಂಡಂತೆ ಆದೇಶಿಸುತ್ತದೆ.

ಸರ್ಕಾರಿ ಆದೇಶ ಸಂಖ್ಯೆ: ಆಇ 45 ಕವಿಇ 2019, ಬೆಂಗಳೂರು, ದಿನಾಂಕ: 1ನೇ ಜುಲೈ 2020.

ಕರ್ನಾಟಕ ಸರ್ಕಾರಿ ವಿಮಾ ಇಲಾಖೆಯು ನಿರ್ವಹಿಸುತ್ತಿರುವ ಕಡ್ಡಾಯ ಜೀವ ವಿಮಾ ಯೋಜನೆಗೆ ಸಂಬಂಧಿಸಿದಂತೆ, 2014-2016ರ ದ್ವೈವಾರ್ಷಿಕ ಅವಧಿಗೆ ಮೌಲ್ಯಮಾಪನ ವರದಿಯನ್ನು ಆಧರಿಸಿ ಈ ಕೆಳಕಂಡಂತೆ ಬೋನಸ್ ನೀಡಲು ಸರ್ಕಾರದ ಮಂಜೂರಾತಿ ನೀಡಲಾಗಿದೆ.

R.N.I. No. KARBIL/2001/47147 POSTAL REGN. No. RNP/KA/BGS/2202/2017-19
Licensed to post without prepayment WPP No. 297

i. ದಿನಾಂಕ: 01.04.2014ರಿಂದ 31.03.2016ರ ದ್ವೈವಾರ್ಷಿಕ ಮೌಲ್ಯಮಾಪನ ಅವಧಿಯಲ್ಲಿ ಚಾಲ್ತಿಯಲ್ಲಿದ್ದ ಎಲ್ಲಾ ಪಾಲಿಸಿಗಳಿಗೆ ಹಾಗೂ ಚಾಲ್ತಿಯಲ್ಲಿದ್ದ ಪ್ರತಿ ತಿಂಗಳ ಅವಧಿಯನ್ನು ಒಳಗೊಂಡಂತೆ ಪಾಲಿಸಿಗಳ ಸ್ಥಿರಪಡಿಸಿದ ವಿಮಾ ಮೊತ್ತದ ಮೇಲೆ ಪ್ರತಿ ಸಾವಿರ ರೂಪಾಯಿಗಳಿಗೆ ಪ್ರತಿ ವರ್ಷಕ್ಕೆ ರೂ.85/- ರಂತೆ ಸರಳ ಪ್ರತ್ಯಾವರ್ತಿ ಲಾಭಾಂಶವನ್ನು (ಸಿಂಪಲ್ ರಿವರ್ಷನರಿ ಬೋನಸ್) ನೀಡುವುದು;

ii. ಅವಧಿಪೂರ್ಣ, ಮರಣ ಜನ್ಯ ಹಾಗೂ ವಿಮಾ ತ್ಯಾಗ ಮೌಲ್ಯಗಳಿಂದ ದಿನಾಂಕ: 01.04.2016 ರಿಂದ 31.03.2018ರ ಅವಧಿಯಲ್ಲಿ ಹೊರ ಹೋಗಿರುವ ವಿಮಾ ಪಾಲಿಸಿಗಳಿಗೆ ಪ್ರತಿ ಸಾವಿರ ರೂಪಾಯಿಗಳಿಗೆ ಪ್ರತಿ ವರ್ಷಕ್ಕೆ ವಾರ್ಷಿಕ ರೂ.85/- ರಂತೆ ಮಧ್ಯಂತರ ಲಾಭಾಂಶವನ್ನು ನೀಡುವುದು.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ,

(ಜಿ.ಶಶಿಧರ್)
ಸರ್ಕಾರದ ಅಧೀನ ಕಾರ್ಯದರ್ಶಿ
(ಆಡಳಿತ ಮತ್ತು ಮುಂಗಡಗಳು)
ಆರ್ಥಿಕ ಇಲಾಖೆ.

ಮುದ್ರಕರು ಹಾಗೂ ಪ್ರಕಾಶಕರು:- ಸಂಕಲನಾಧಿಕಾರಿಗಳು, ಕರ್ನಾಟಕ ರಾಜ್ಯಪತ್ರ, ಸರ್ಕಾರಿ ಕೇಂದ್ರ ಮುದ್ರಣಾಲಯ, ಬೆಂಗಳೂರು

SUNIL GARDE Digitally signed by SUNIL GARDE Date: 2020.07.15 16:50:52 +05'30'